**All India Radio: Bangalore**
**National Bulletin In Kannada**
**21.06.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.06.2026 1.10 p.m.**

**<><><><>**

ಮುಖ್ಯಾಂಶಗಳು

1. ಹಡಗು ನಿರ್ಮಾಣ ವಲಯದಲ್ಲಿ ಭಾರತ, ಹೊಸ ದೃಷ್ಟಿಕೋನದೊಂದಿಗೆ ಮುನ್ನಡೆ-ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿಪಾದನೆ
2. ಯೋಗ, ಜಾಗತಿಕ ಸಮುದಾಯಕ್ಕೆ ಭಾರತದ ಪ್ರಾಚೀನ ಸಾಂಸ್ಕೃತಿಕ ಪರಂಪರೆ ನೀಡಿದ ಅತ್ಯಮೂಲ್ಯ ಕೊಡುಗೆ - ರಾಷ್ಟ್ರಪತಿ ದ್ರೌಪದಿ ಮುರ್ಮು
3. ಇಂದು ನೀಟ್ ಯುಜಿ ಮರುಪರೀಕ್ಷೆ; ಲೋಪವೆಸಗಲು ಯತ್ನಿಸುವವರಿಗೆ ಶಿಕ್ಷಣ ಸಚಿವರ ಕಠಿಣ ಎಚ್ಚರಿಕೆ; ಪರೀಕ್ಷಾರ್ಥಿಗಳಿಗೆ ಶುಭ ಹಾರೈಕೆ
4. ಫಿಫಾ ವಿಶ್ವಕಪ್ ಫುಟ್ಬಾಲ್; ಟ್ಯುನಿಷಿಯಾ ವಿರುದ್ಧ ಜಪಾನ್‌ಗೆ ೪-೦ ಅಂತರದ ಭರ್ಜರಿ ಗೆಲುವು
5. ತ್ರಿರಾಷ್ಟ್ರ ಏಕದಿನ ಕ್ರಿಕೆಟ್ ಪಂದ್ಯಾವಳಿ; ಫೈನಲ್‌ನಲ್ಲಿ ಶ್ರೀಲಂಕಾ ಎ ತಂಡದ ವಿರುದ್ಧ ಬೃಹತ್ ಮೊತ್ತದತ್ತ ಭಾರತ ಎ ತಂಡ; ವೈಭವ್ ಸೂರ್ಯವಂಶಿಯಿಂದ ಅತಿ ವೇಗದ ಅರ್ಧಶತಕ

<><><><>

ಭಾರತವು ಹಡಗು ನಿರ್ಮಾಣ ವಲಯದಲ್ಲಿ ಹೊಸ ದೃಷ್ಟಿಕೋನದೊಂದಿಗೆ ಮುನ್ನಡೆಯುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ. ಕೋಲ್ಕತ್ತಾದಲ್ಲಿಂದು ಸ್ವದೇಶಿ ತಂತ್ರಜ್ಞಾನದ ಐಎನ್‌ಎಸ್ ದುನಗಿರಿ, ಐಎನ್‌ಎಸ್ ಸಂಶೋಧಕ್ ಮತ್ತು ಐಎನ್‌ಎಸ್ ಅಗ್ರಯ್ ಯುದ್ಧನೌಕೆಗಳನ್ನು ರಾಷ್ಟ್ರಕ್ಕೆ ಸಮರ್ಪಿಸಿ ಅವರು ಮಾತನಾಡಿದರು. ನೌಕಾಪಡೆಯ ಯುದ್ಧ ಕಾರ್ಯಾಚರಣೆ ಹಾಗೂ ಕರಾವಳಿ ರಕ್ಷಣೆಯನ್ನು ಬಲಪಡಿಸುವ ಈ ನೌಕೆಗಳ ನಿರ್ಮಾಣ, ದುರಸ್ತಿ ಮತ್ತು ನಿರ್ವಹಣೆಯನ್ನು ಒಂದು ಪ್ರಮುಖ ರಾಷ್ಟ್ರೀಯ ಮಿಷನ್‌ನ ಭಾಗವಾಗಿ ಸರ್ಕಾರ ಪರಿಗಣಿಸಿದೆ ಎಂದು ಅವರು ತಿಳಿಸಿದರು. ಮುಂಬರುವ ವರ್ಷಗಳಲ್ಲಿ ಕಡಲ ವಲಯ, ಲಕ್ಷಾಂತರ ಹೊಸ ಉದ್ಯೋಗಗಳನ್ನು ಸೃಷ್ಟಿಸಲಿದ್ದು, ಇದನ್ನು ಅಭಿವೃದ್ಧಿ ಹೊಂದಿದ ಭಾರತದ 'ಉದ್ಯೋಗ

ಚಾಲಕ ಶಕ್ತಿಯಾಗಿ ಪರಿಗಣಿಸಲಾಗಿದೆ ಎಂದು ಪ್ರಧಾನಿ ಹೇಳಿದರು. ದೇಶದ ರಕ್ಷಣಾ ರಫ್ತು ಅಭೂತಪೂರ್ವ ವೇಗದಲ್ಲಿ ಬೆಳೆದಿದ್ದು, ೨೦೧೪ ರಲ್ಲಿದ್ದ ೭೦೦ ಕೋಟಿ ರೂಪಾಯಿಗಳಿಂದ ಇಂದು ಸುಮಾರು ೪೦ ಸಾವಿರ ಕೋಟಿ ರೂಪಾಯಿಗಳಿಗೆ ಏರಿಕೆಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು. ಶೇಕಡಾ ೭೫ ಕ್ಕೂ ಹೆಚ್ಚು ಸ್ವದೇಶಿ ಸಾಮಗ್ರಿಗಳನ್ನು ಹೊಂದಿರುವ ಈ ನೌಕೆಗಳ ನಿರ್ಮಾಣದಲ್ಲಿ ೨೦೦ ಕ್ಕೂ ಹೆಚ್ಚು ಎಂಎಸ್‌ಎಂಇಗಳು ಭಾಗಿಯಾಗಿವೆ ಎಂದು ನೌಕಾಪಡೆ ತಿಳಿಸಿದೆ.

<><><><>

ಇಂದು ಜಗತ್ತಿನಾದ್ಯಂತ ೧೨ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಗುತ್ತಿದೆ. ಆರೋಗ್ಯಕರ, ಸಕ್ರಿಯ ಮತ್ತು ಘನತೆಯುಳ್ಳ ವಯೋವೃದ್ಧಿಗಾಗಿ ಯೋಗವನ್ನು ಜೀವನಪರ್ಯಂತದ ಅಭ್ಯಾಸವನ್ನಾಗಿ ಅಳವಡಿಸಿಕೊಳ್ಳುವುದರ ಮಹತ್ವವನ್ನು ಸಾರುವ 'ಆರೋಗ್ಯಕರ ವಯೋವೃದ್ಧಿಗಾಗಿ ಯೋಗ' ಎಂಬುದು ಈ ವರ್ಷದ ಘೋಷವಾಕ್ಯವಾಗಿದೆ.

<><><><>

ಯೋಗವು, ಜಾಗತಿಕ ಸಮುದಾಯಕ್ಕೆ ಭಾರತದ ಪ್ರಾಚೀನ ಸಾಂಸ್ಕೃತಿಕ ಪರಂಪರೆ ನೀಡಿದ ಅತ್ಯಮೂಲ್ಯ ಕೊಡುಗೆಯಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಬಣ್ಣಿಸಿದ್ದಾರೆ. ೧೨ನೇ ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ಮಧ್ಯಪ್ರದೇಶದ ಜಬಲ್‌ಪುರದಲ್ಲಿ ನಡೆದ ಯೋಗ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇಂದಿನ ಸವಾಲುಗಳ ಜಗತ್ತಿನಲ್ಲಿ ಯೋಗವು ಮನುಕುಲವನ್ನು, ಶಾಂತಿ ಮತ್ತು ಸಾಮೂಹಿಕ ಕಲ್ಯಾಣದತ್ತ ಮುನ್ನಡೆಸುತ್ತದೆ ಎಂದರು. 'ಆರೋಗ್ಯಕರ ವಯೋವೃದ್ಧಿಗಾಗಿ ಯೋಗ' ಎಂಬ ಘೋಷಣೆಯಡಿ ನಡೆದ ಈ ಆಚರಣೆಯಲ್ಲಿ ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ಅವರು ರಾಷ್ಟ್ರಪತಿಗಳೊಂದಿಗೆ ಭಾಗವಹಿಸಿದ್ದರು.

<><><><>

ಇದಕ್ಕೂ ಮುನ್ನ ಪಶ್ಚಿಮ ಬಂಗಾಳದ ಕೋಲ್ಕತ್ತಾದ ಐತಿಹಾಸಿಕ ರೆಡ್ ರೋಡ್‌ನಲ್ಲಿ ಇಂದು ಮುಂಜಾನೆ ನಡೆದ ೧೨ನೇ ಅಂತಾರಾಷ್ಟ್ರೀಯ ಯೋಗ ದಿನದ ಪ್ರಧಾನ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾಲ್ಗೊಂಡು ಯೋಗ ಪ್ರದರ್ಶನವನ್ನು ಮುನ್ನಡೆಸಿದರು. ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಯೋಗವು ಕೇವಲ ದೈಹಿಕ ಶ್ರಮದ ಸಾಧನವಲ್ಲ ಮತ್ತು ಇದು ಯಾವುದೇ ಒಂದು ವಯೋಮಾನಕ್ಕೆ ಸೀಮಿತವಾದುದಲ್ಲ, ಬದಲಿಗೆ ಅದು ಮಾನವ ಚೈತನ್ಯದ ಅಭಿವ್ಯಕ್ತಿಯಾಗಿದೆ ಎಂದು ತಿಳಿಸಿದರು. ೨೦ನೇ ವಯಸ್ಸಿಗಿಂತ ೪೦ರಲ್ಲಿ ಹೆಚ್ಚಿನ ದೈಹಿಕ ನಮ್ಯತೆಯನ್ನು ಹೊಂದುವುದು, ೩೦ನೇ ವಯಸ್ಸಿಗಿಂತ ೫೦ರಲ್ಲಿ ಹೆಚ್ಚು

ಚೈತನ್ಯಪೂರ್ಣವಾಗಿರುವುದು ಹಾಗೂ ೫೦ರ ವಯಸ್ಸಿಗಿಂತ ೭೦ ರ ವಯಸ್ಸಿನಲ್ಲಿ ರೋಗರುಜಿನಗಳನ್ನು ತಡೆದುಕೊಳ್ಳುವ ಶಕ್ತಿಯೊಂದಿಗೆ ಸದೃಢ ದೇಹ ಹೊಂದುವ ಗುರಿಇಟ್ಟುಕೊಂಡಿರಬೇಕು ಎಂದು ಅವರು ಕರೆ ನೀಡಿದರು.

<><><><>

ಇಂದು ನಡೆಯಲಿರುವ ನೀಟ್ ಯುಜಿ ೨೦೨೪ರ ಮರುಪರೀಕ್ಷೆಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಆಟವಾಡದಂತೆ ಲೋಪವೆಸಗಲು ಯತ್ನಿಸುವ ಬದ್ಧತೆ ಇಲ್ಲದ ವ್ಯಕ್ತಿಗಳಿಗೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಕಠಿಣ ಎಚ್ಚರಿಕೆ ನೀಡಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೀಟ್-ಯುಜಿ ಮರುಪರೀಕ್ಷೆಗೆ ೨೨ ಲಕ್ಷ ವಿದ್ಯಾರ್ಥಿಗಳು ಹಾಜರಾಗುತ್ತಿದ್ದಾರೆ. ವಿದ್ಯಾರ್ಥಿಗಳು ಯಾವುದೇ ಭಯ ಅಥವಾ ಆತಂಕವಿಲ್ಲದೆ ಪರೀಕ್ಷೆ ಬರೆಯುವಂತೆ ಮನವಿ ಮಾಡಿ, ಶುಭ ಹಾರೈಸಿದರು. ಪರೀಕ್ಷೆಯನ್ನು ಸುಗಮವಾಗಿ ನಡೆಸಲು ಅಗತ್ಯವಿರುವ ಎಲ್ಲ ವ್ಯವಸ್ಥೆಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಸಿಬಿಎಸ್ಇ ಪರೀಕ್ಷಾ ಫಲಿತಾಂಶಗಳ ಕುರಿತು ಮಾತನಾಡಿದ ಸಚಿವರು, ಉಳಿದಿರುವ ಫಲಿತಾಂಶಗಳನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ತಿಳಿಸಿದರು. ಒಟ್ಟು ೧೭ ಲಕ್ಷ ಅಭ್ಯರ್ಥಿಗಳ ಪೈಕಿ ಸುಮಾರು ೧೫.೫ ಲಕ್ಷ ವಿದ್ಯಾರ್ಥಿಗಳ ಫಲಿತಾಂಶಗಳನ್ನು ಈಗಾಗಲೇ ಪ್ರಕಟಿಸಲಾಗಿದೆ ಎಂದು ಮಾಹಿತಿ ನೀಡಿದರು. ಮತ್ತೊಂದೆಡೆ, ಪರೀಕ್ಷಾ ಕೇಂದ್ರಗಳಿಗೆ ಮಧ್ಯಾಹ್ನ ೧:೩೦ರ ನಂತರ ಯಾರಿಗೂ ಪ್ರವೇಶವಿರುವುದಿಲ್ಲ ಎಂದು ತಿಳಿಸಿರುವ ಎನ್‌ಟಿಎ, ಪ್ರವೇಶ ಪತ್ರ ಮತ್ತು ಗುರುತಿನ ಚೀಟಿಗಳೊಂದಿಗೆ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಬೇಗನೆ ತಲುಪುವಂತೆ ಸೂಚಿಸಿದೆ.

<><><><>

ರಾಜಸ್ಥಾನದ ಸಂಪೂರ್ಣ ಗಡಿ ಪ್ರದೇಶವನ್ನು ಸಂಪರ್ಕಿಸುವ ರೈಲು ಜಾಲ ಸ್ಥಾಪನೆಗೆ ಮಹತ್ವಾಕಾಂಕ್ಷಿ ಯೋಜನೆಯ ಕಾಮಗಾರಿ ಪ್ರಗತಿಯಲ್ಲಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಇಂದು ಬಿಕಾನೇರ್ ರೈಲು ನಿಲ್ದಾಣದಲ್ಲಿ ಲಾಲ್‌ಗಢ್-ಸಬರಮತಿ ರೈಲಿಗೆ ಚಾಲನೆ ನೀಡುವ ಮುನ್ನ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈ ಯೋಜನೆಯು, ಗಡಿ ಪ್ರದೇಶದ ಜನರಿಗೆ ರೈಲು ಸಂಪರ್ಕ ಕಲ್ಪಿಸುವುದರ ಜೊತೆಗೆ ರಾಷ್ಟ್ರೀಯ ಭದ್ರತಾ ದೃಷ್ಟಿಯಿಂದಲೂ ಅತ್ಯಂತ ಮಹತ್ವದ್ದಾಗಿರಲಿದೆ. ಈ ಯೋಜನೆಯ ವಿವರವಾದ ಯೋಜನಾ ವರದಿ

ಸಿದ್ಧಪಡಿಸಲಾಗುತ್ತಿದೆ ಎಂದು ತಿಳಿಸಿದರು. ದೇಶಾದ್ಯಂತ ಭಾರತೀಯ ರೈಲ್ವೆಯ ಆಧುನೀಕರಣ ಕಾರ್ಯಗಳು ವೇಗವಾಗಿ ನಡೆಯುತ್ತಿವೆ ಎಂದ ಸಚಿವರು, ರಾಷ್ಟ್ರದಾದ್ಯಂತ ೧ ಸಾವಿರದ ೩೦೦ ರೈಲು ನಿಲ್ದಾಣಗಳ ಪುನರ್ ಅಭಿವೃದ್ಧಿ ಮತ್ತು ಆಧುನೀಕರಣ ಕಾರ್ಯ ಪ್ರಗತಿಯಲ್ಲಿದ್ದು, ರಾಜಸ್ಥಾನದ ಹಲವು ನಿಲ್ದಾಣಗಳೂ ಇದರಲ್ಲಿ ಸೇರಿವೆ ಎಂದು ತಿಳಿಸಿದರು. ರಾಜಸ್ಥಾನದಲ್ಲಿ ಪ್ರಸ್ತುತ ೭೬ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ರೈಲ್ವೆ ಯೋಜನೆಗಳು ಅನುಷ್ಠಾನಗೊಳ್ಳುತ್ತಿವೆ. ಕಳೆದ ೧೨ ವರ್ಷಗಳ ಹಿಂದೆ ರಾಜ್ಯಕ್ಕೆ ಕೇವಲ ೬೫೦ ಕೋಟಿ ರೂಪಾಯಿಗೂ ಸ್ವಲ್ಪ ಹೆಚ್ಚಿನ ರೈಲ್ವೆ ಅಭಿವೃದ್ಧಿ ಅನುದಾನ ದೊರೆಯುತ್ತಿತ್ತು. ಆದರೆ ಇದೀಗ ರಾಜಸ್ಥಾನದಲ್ಲಿ ರೈಲ್ವೆ ಅಭಿವೃದ್ಧಿ ಕಾಮಗಾರಿಗಳಿಗೆ ವಾರ್ಷಿಕವಾಗಿ ೧೦ ಸಾವಿರ ಕೋಟಿ ರೂಪಾಯಿಗೂ ಅಧಿಕ ಹೂಡಿಕೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

<><><><>

ಜಮ್ಮು ಮತ್ತು ಕಾಶ್ಮೀರದಲ್ಲಿ, ಅಮರನಾಥ ಯಾತ್ರಿಕರ ಸುಗಮ ಮತ್ತು ತೊಂದರೆ-ರಹಿತ ನೋಂದಣಿಯನ್ನು ಸ್ಥಳದಲ್ಲೇ ಖಚಿತಪಡಿಸಿಕೊಳ್ಳಲು, ೭೫ ಡೇಟಾ ಎಂಟ್ರಿ ಆಪರೇಟರ್‌ಗಳಿಗೆ ನಿನ್ನೆ ಜಿಲ್ಲಾ ಪ್ರಧಾನ ಕಚೇರಿಯಲ್ಲಿ ತರಬೇತಿ ಕಾರ್ಯಕ್ರಮವನ್ನು ನಡೆಸಲಾಯಿತು. ವಾರ್ಷಿಕ ಯಾತ್ರೆಯ ಸಮಯದಲ್ಲಿ ಅನುಸರಿಸಬೇಕಾದ ಇಕೆವೈಸಿ ಕಾರ್ಯವಿಧಾನಗಳನ್ನು ನಿರ್ವಾಹಕರಿಗೆ ಪರಿಚಯಿಸಿಕೊಡುಲು ಈ ತರಬೇತಿ ಕಾರ್ಯಗಾರ ಹಮ್ಮಿಕೊಳ್ಳಲಾಗಿತ್ತು. ಯಾತ್ರೆಗೆ ಆನ್‌ಲೈನ್ ನೋಂದಣಿ ಈಗಾಗಲೇ ಆರಂಭವಾಗಿದೆ. ಸ್ಥಳದಲ್ಲೇ ನೋಂದಣಿಗಾಗಿ, ಟೋಕನ್ ವಿತರಣೆ ಇದೇ ೩೦ ರಿಂದ ಪ್ರಾರಂಭವಾಗಲಿದೆ. ಸ್ಥಳದಲ್ಲೇ ನೋಂದಣಿ ಮತ್ತು ಇಕೆವೈಸಿ ಇಲ್ಲದ ನೋಂದಣಿಗಳನ್ನು ಇಕೆವೈಸಿ ಗೆ ಪರಿವರ್ತಿಸುವ ಪ್ರಕ್ರಿಯೆ ಜುಲೈ ೧ ರಿಂದ ಪ್ರಾರಂಭವಾಗಲಿದೆ.

<><><><>

ಪ್ರಧಾನ ಮಂತ್ರಿ ಮುದ್ರಾ ಯೋಜನೆಯಡಿ ೬ ಸಾವಿರ ೫೫೦ ರೂಪಾಯಿ ಪ್ರಕ್ರಿಯಾ ಶುಲ್ಕ ಪಾವತಿಸಿದರೆ ೧೦ ಲಕ್ಷ ರೂಪಾಯಿ ಸಾಲ ನೀಡಲಾಗುವುದು ಎಂಬ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಮಾಹಿತಿಯನ್ನು ಕೇಂದ್ರ ಸರ್ಕಾರ ತಳ್ಳಿಹಾಕಿದೆ. ಕೇಂದ್ರ ವಾರ್ತಾ ಶಾಖೆಯ ಸತ್ಯಶೋಧನಾ ಘಟಕವು ಈ ಕುರಿತು ಪ್ರಸಾರವಾಗುತ್ತಿರುವ ಪತ್ರವು ನಕಲಿಯಾಗಿದೆ ಎಂದು ಸ್ಪಷ್ಟಪಡಿಸಿದೆ. ಇಂತಹ ಸುಳ್ಳು ಮತ್ತು ದಾರಿತಪ್ಪಿಸುವ ಮಾಹಿತಿಗಳ ಬಗ್ಗೆ ಸಾರ್ವಜನಿಕರು ಎಚ್ಚರಿಕೆಯಿಂದಿರಬೇಕು. ಯಾವುದೇ ಮಾಹಿತಿಯನ್ನು ನಂಬುವ ಮುನ್ನ ಅಧಿಕೃತ ಮೂಲಗಳಿಂದಲೇ ದೃಢೀಕರಿಸಿಕೊಳ್ಳುವಂತೆ ಸಂಸ್ಥೆ ಮನವಿ ಮಾಡಿದೆ.

<><><><>

ಒಟ್ಟು ೯೪ ಭಾರತೀಯ ಸಿಬ್ಬಂದಿಯನ್ನು ಒಳಗೊಂಡಿರುವ ಹಾಗೂ ೮.೬ ಲಕ್ಷ ಮೆಟ್ರಿಕ್ ಟನ್‌ಗೂ ಅಧಿಕ ಕಚ್ಚಾ ತೈಲವನ್ನು ಹೊತ್ತೊಯ್ಯುತ್ತಿರುವ ಮೂರು ಭಾರತೀಯ ಧ್ವಜದ ತೈಲ ನೌಕೆಗಳು ನಿನ್ನೆ ಹಾರ್ಮುಜ್ ಜಲಸಂಧಿಯನ್ನು ಯಶಸ್ವಿಯಾಗಿ ದಾಟಿದ್ದು, ಭಾರತದತ್ತ ಪ್ರಯಾಣ ಬೆಳೆಸಿವೆ ಎಂದು ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೊವಾಲ್ ತಿಳಿಸಿದ್ದಾರೆ. ದೇಶ್ ವೈಭವ್, ದೇಶ್ ವಿಭೋರ್ ಮತ್ತು ಸನ್ಮಾರ್ ಹೆರಾಲ್ಡ್ ಎಂಬ ಹೆಸರಿನ ತೈಲ ನೌಕೆಗಳು ಈ ಜಲಸಂಧಿಯನ್ನು ಯಶಸ್ವಿಯಾಗಿ ದಾಟಿವೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಹಂಚಿಕೊಂಡಿರುವ ಸಚಿವ ಸೋನೊವಾಲ್, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೃಢ ನಾಯಕತ್ವದಲ್ಲಿ, ಭಾರತದ ಕಡಲ ಹಿತಾಸಕ್ತಿಗಳನ್ನು ರಕ್ಷಿಸಲು ಮತ್ತು ಭದ್ರಪಡಿಸಲು ಸರ್ಕಾರ ಅತ್ಯಂತ ಆದ್ಯತೆಯ ಮೇರೆಗೆ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದ್ದಾರೆ.

<><><><>

ಗ್ವಾಡಾ ಲುಪ್ಪೆಯಲ್ಲಿ ನಡೆದ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ಎಫ್ ಗುಂಪಿನ ಪಂದ್ಯದಲ್ಲಿ ಟ್ಯುನಿಷಿಯಾ ವಿರುದ್ಧ ಜಪಾನ್ ತಂಡ ೪-೦ ಗೋಲುಗಳ ಅಂತರದ ಭರ್ಜರಿ ಜಯ ಸಾಧಿಸಿದೆ. ಇದಕ್ಕೂ ಮುನ್ನ ಕನ್ಸಾಸ್ ನಗರದಲ್ಲಿ ನಡೆದ ಇಕ್ವೇಡರ್ ಮತ್ತು ಕ್ಯೂರಸಾವ್ ನಡುವಿನ 'ಇ' ಗುಂಪಿನ ಪಂದ್ಯ ಯಾವುದೇ ಗೋಲುಗಳಿಲ್ಲದೆ ಡ್ರಾನಲ್ಲಿ ಅಂತ್ಯಗೊಂಡಿದೆ. ಇಂದು ಅಟ್ಲಾಂಟದಲ್ಲಿ ನಡೆಯಲಿರುವ 'ಎಚ್' ಗುಂಪಿನ ಪಂದ್ಯದಲ್ಲಿ ಸ್ಪೇನ್ ಮತ್ತು ಸೌದಿಅರಬೇಯಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೯.೩೦ ಆರಂಭವಾಗಲಿದೆ.

<><><><>

ಶ್ರೀಲಂಕಾದ ದಂಬುಲಾದಲ್ಲಿ ಇಂದು ನಡೆಯುತ್ತಿರುವ ಭಾರತ, ಶ್ರೀಲಂಕಾ, ಅಫ್ಘಾನಿಸ್ತಾನ್‌ದ ಎ ತಂಡಗಳ ನಡುವಿನ ತ್ರಿರಾಷ್ಟ್ರ ಏಕದಿನ ಕ್ರಿಕೆಟ್ ಸರಣಿಯ ಫೈನಲ್ ಪಂದ್ಯ ಪ್ರಗತಿಯಲ್ಲಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತ ಎ ತಂಡ ಇತ್ತೀಚಿನ ವರದಿ ಬಂದಾಗ ೪೫.೩ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೩೨೨ ರನ್ ಗಳಿಸಿ ಆಡುತ್ತಿದೆ. ಆರಂಭಿಕ ಬ್ಯಾಟರ್‌ಗಳಾಗಿ ಪ್ರಿಯಾಂಶು ಆರ್ಯ ಮತ್ತು ವೈಭವ್ ಸೂರ್ಯವಂಶಿ ತಂಡಕ್ಕೆ ಉತ್ತಮ ಆರಂಭ ನೀಡಿದರು. ಪ್ರಮುಖವಾಗಿ ವೈಭವ್ ಸೂರ್ಯವಂಶಿ ಕೇವಲ ೧೧ ಎಸೆತಗಳಲ್ಲಿ ಅರ್ಧಶತಕ ಗಳಿಸಿ ದಾಖಲೆ ನಿರ್ಮಿಸಿ, ಕೇವಲ ೬ ರನ್‌ಗಳಿಂದ ಶತಕದಿಂದ ವಂಚಿತರಾದರು. ಅವರ ನಂತರ ಋತುರಾಜ್

ಗಾಯಕ್ವಾಡ್ ೪೦ ರನ್‌ಗಳಿಸಿದರೆ, ತಿಲಕ್ ವರ್ಮಾ ಸಹ ಅರ್ಧಶತಕ ಗಳಿಸಿ ತಂಡದ ಮೊತ್ತವನ್ನು ಹಿಗ್ಗಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>